# 02.04.2024

ಆಕಾಶವಾಣಿ–ಪ್ರದೇಶ ಸಮಾಚಾರ

ಓದುತ್ತಿರುವವರು–ಶ್ರೀಧರ ಹೆಗಡೆ ಭದ್ರನ್

ಮುಖ್ಯಾಂಶಗಳು:

- ಕೇಂದ್ರ ಗೃಹ ಖಾತೆ ಸಚಿವ ಅಮಿತ್ ಶಾ ಇಂದು ರಾಜ್ಯ ಭೇಟಿ; ಕಾರ್ಯಕರ್ತರ ಸಮಾವೇಶದಲ್ಲಿ ಭಾಗಿ.
- ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 20 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಮೊದಲ ಹಂತದ ಚುನಾವಣೆ: ನಾಮಪತ್ರ ಸಲ್ಲಿಕೆ ಬಿರುಸು
- ರಾಜ್ಯದ ವಿವಿಧೆಡೆ ಮತದಾರ ಜಾಗೃತಿ ಅಭಿಯಾನ

ಲೋಕಸಭಾ ಚುನಾವಣೆ ಹಿನ್ನೆಲೆ; ಕೇಂದ್ರ ಗೃಹ ಸಚಿವ ಹಾಗೂ ಬಿಜೆಪಿ ಹಿರಿಯ ಮುಖಂಡ ಅಮಿತ್ ಶಾ ಅವರು, ಇಂದು ರಾಜ್ಯಕ್ಕೆ ಆಗಮಿಸಲಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನಿಲ್‌ಕುಮಾರ್ ತಿಳಿಸಿದ್ದಾರೆ.

ಬೆಂಗಳೂರು ಅರಮನೆ ಮೈದಾನದಲ್ಲಿ ಬೆಳಗ್ಗೆ 5 ಲೋಕಸಭಾ ಕ್ಷೇತ್ರಗಳ ಪಕ್ಷದ ಕಾರ್ಯಕರ್ತರ ಸಮಾವೇಶ ನಡೆಯಲಿದ್ದು, ಅಮಿತ್ ಶಾ ಸೇರಿದಂತೆ ಹಿರಿಯ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದರು.

ಸಂಜೆ, ಚನ್ನಪಟ್ಟಣದಲ್ಲಿ ನಡೆಯಲಿರುವ ರೋಡ್ ಶೋನಲ್ಲಿ ಭಾಗಿಯಾಗಲಿದ್ದಾರೆ. ಚಿಕ್ಕಬಳ್ಳಾಪುರ, ತುಮಕೂರು, ದಾವಣಗೆರೆ, ಬೀದರ್ ಮತ್ತು ಬೆಳಗಾವಿ ಜಿಲ್ಲೆಯ ಕೋರ್ ಕಮಿಟಿ ಸದಸ್ಯರೊಂದಿಗೆ ಅಮಿತ್ ಶಾ ಚರ್ಚೆ ನಡೆಸಲಿದ್ದಾರೆ ಎಂದು ತಿಳಿಸಿದರು.

ಮೊದಲ ಹಂತದಲ್ಲಿ ನಡೆಯಲಿರುವ 14 ಕ್ಷೇತ್ರಗಳ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪ್ರಚಾರ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ರಾಜ್ಯದ ನಾಯಕರೊಂದಿಗೆ ಕೇಂದ್ರ ಗೃಹ ಸಚಿವರು ಸಮಾಲೋಚಿಸಲಿದ್ದಾರೆ ಎಂದು ಹೇಳಿದರು.

ಡಿಡಿ ಚಂದನ

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 20 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರು ರಾಜಕೀಯವಾಗಿ ಪ್ರಬುದ್ಧರಾಗಿದ್ದಾರೆ ಹಾಗೂ ಬುದ್ಧಿವಂತರಿದ್ದಾರೆ.

ಈ ಬಾರಿ ಮೈಸೂರು–ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ. ಕಾಂಗ್ರೆಸ್ ಸಿದ್ಧಾಂತವನ್ನು ಒಪ್ಪಿಕೊಂಡು ಬರುವವರಿಗೆ ತಮ್ಮ ಪಕ್ಷದ ಬಾಗಿಲು ಸದಾ ತೆರೆದಿರುತ್ತದೆ ಎಂದು ತಿಳಿಸಿದರು.

ಡಿಡಿ ಚಂದನ

ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ, ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಬಿರುಸುಗೊಂಡಿದೆ.

ಎರಡು ಹಂತಗಳ ಪೈಕಿ, ಮೊದಲ ಹಂತದಲ್ಲಿ ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಕೊಡಗು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಲೋಕಸಭಾ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದೆ.

ನಾಮಪತ್ರ ಸಲ್ಲಿಕೆಗೆ ಇದೇ 4ರಂದು ಕೊನೆಯ ದಿನವಾಗಿದ್ದು, ಪರಿಶೀಲನೆ ಏಪ್ರಿಲ್ 5ರಂದು ನಡೆಯಲಿದೆ. ಉಮೇದುವಾರಿಕೆ ವಾಪಸಾತಿಗೆ ಏಪ್ರಿಲ್ 8 ಕಡೆಯ ದಿನ. ಏಪ್ರಿಲ್ 26ರಂದು ಮತದಾನ ಹಾಗೂ ಜೂನ್ 4ರಂದು ಮತ ಎಣಿಕೆ ನಡೆಯಲಿದೆ.

ಡಿಡಿ ಚಂದನ

ಮಂಡ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ, ನಾಮಪತ್ರವನ್ನು ಜಿಲ್ಲಾ ಚುನಾವಣಾಧಿಕಾರಿಗಳಿಗೆ ಮೂರು ಪ್ರತಿಗಳಲ್ಲಿ ಪ್ರತ್ಯೇಕವಾಗಿ ಸಲ್ಲಿಸಿದರು.

ಈ ವೇಳೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ನಾಮಪತ್ರ ಸಲ್ಲಿಕೆಗೆ ಮುನ್ನ ಬೃಹತ್ ಜಾಥಾ ನಡೆಸಿದರು. ಈ ವೇಳೆ ವಿವಿಧ ಜಾನಪದ ಕಲಾ ತಂಡಗಳು ಭಾಗಿಯಾಗಿದ್ದವು.

ಬಳಿಕ ಡಿ.ಕೆ.ಶಿವಕುಮಾರ್, ಮಂಡ್ಯದ ಕಾಂಗ್ರೆಸ್ ಅಭ್ಯರ್ಥಿ ಅತ್ಯಧಿಕ ಮತಗಳಿಂದ ಗೆಲುವು ಸಾಧಿಸುತ್ತಾರೆ. ಪಕ್ಷ ಸಾಮಾನ್ಯ ಕಾರ್ಯಕರ್ತನನ್ನು ಗುರುತಿಸಿ ಟಿಕೆಟ್ ನೀಡಿದೆ. ಜಿಲ್ಲೆಯ ಜನರು ಪ್ರಜ್ಞಾವಂತರು, ಬುದ್ಧಿವಂತರು ಎಂದು ಹೇಳಿದರು.

ಚಿಕ್ಕಬಳ್ಳಾಪುರ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ, ಜಿಲ್ಲಾ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು. ಈ ವೇಳೆ, ಪಕ್ಷದ ಹಲವು ಮುಖಂಡರು ಉಪಸ್ಥಿತರಿದ್ದರು.

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾ ರೆಡ್ಡಿ, ನಾಮಪತ್ರ ಸಲ್ಲಿಸಿದರು. ಈ ವೇಳೆ, ಸಚಿವ ರಾಮಲಿಂಗಾರೆಡ್ಡಿ, ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ನಾಮಪತ್ರ ಸಲ್ಲಿಕೆಗೂ ಮುನ್ನ ಮೆರವಣಿಗೆ ನಡೆಸಲಾಯಿತು. ಡಿಡಿ ಚಂದನ

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ.ಮೋಹನ್, ಚುನಾವಣಾಧಿಕಾರಿ ಡಾಕ್ಟರ್ ಕೆ.ಹರೀಶ್‌ಕುಮಾರ್ ಅವರಿಗೆ ಉಮೇದುವಾರಿಕೆ ಸಲ್ಲಿಸಿದರು.

ಈ ವೇಳೆ, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಡಿ.ವಿ.ಸದಾನಂದಗೌಡ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ, ಚಿತ್ರದುರ್ಗದಲ್ಲಿ ನಿನ್ನೆ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರಿಗೆ ನಾಮಪತ್ರ ಸಲ್ಲಿಸಿದರು. ಪಕ್ಷದ ಮುಖಂಡರಾದ ಜಿ.ಎಚ್.ತಿಪ್ಪಾರೆಡ್ಡಿ, ಎನ್.ತಿಪ್ಪೇಸ್ವಾಮಿ, ವಿಧಾನಪರಿಷತ್ ಸದಸ್ಯ ನವೀನ್, ಬಿಜೆಪಿ ಮತ್ತು ಜೆಡಿಎಸ್‌ನ ನಾಯಕರು ಉಪಸ್ಥಿತರಿದ್ದರು.

ಚಿಕ್ಕಬಳ್ಳಾಪುರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾಕ್ಟರ್ ಕೆ.ಸುಧಾಕರ್, ನಿನ್ನೆ ನಾಮಪತ್ರ ಸಲ್ಲಿಸಿದರು. ಈ ವೇಳೆ, ಬಿಜೆಪಿ ಹಾಗೂ ಜೆಡಿಎಸ್‌ನ ಹಲವು ಮುಖಂಡರು ಉಪಸ್ಥಿತರಿದ್ದರು. ನಾಮಪತ್ರ ಸಲ್ಲಿಕೆಗೆ ಮುನ್ನ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದರು.

ತುಮಕೂರು ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿಯಾಗಿ ವಿ.ಸೋಮಣ್ಣ, ನಿನ್ನೆ ನಾಮಪತ್ರ ಸಲ್ಲಿಸಿದರು. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಒಮ್ಮತದ ಅಭ್ಯರ್ಥಿಯಾಗಿರುವ ವಿ.ಸೋಮಣ್ಣ, ತುಮಕೂರಿನಲ್ಲಿ ಜಿಲ್ಲಾ ಚುನಾವಣಾಧಿಕಾರಿ ಶುಭಾ ಕಲ್ಯಾಣ್ ಅವರಿಗೆ ಉಮೇದುವಾರಿಕೆ ಸಲ್ಲಿಸಿದರು.

ಡಿಡಿ ಚಂದನ

ಉತ್ತಮ ಸರ್ಕಾರ ರಚನೆಯ ಗುರುತರವಾದ ಜವಾಬ್ದಾರಿಯನ್ನು ಭಾರತದ ಸಂವಿಧಾನ ಪ್ರತಿಯೊಬ್ಬರಿಗೂ ನೀಡಿದೆ ಎಂದು ದಾವಣಗೆರೆ ಜಿಲ್ಲಾ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಕರಣ್ಣನವರ್ ಹೇಳಿದ್ದಾರೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ದಾವಣಗೆರೆಯಲ್ಲಿ ನಿನ್ನೆ ವಿವಿಧ ಸ್ವ ಸಹಾಯ ಸಂಘಗಳ ಮಹಿಳೆಯರಿಗೆ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಉತ್ತಮ ಅಭ್ಯರ್ಥಿಯನ್ನು ಆರಿಸಿ ಕಳುಹಿಸಿದರೆ ಅವರು ಸಮುದಾಯದ ಅಭಿವೃದ್ಧಿಗೆ ಬೇಕಾದಂತಹ ಕಾನೂನು ರಚನೆ ಮಾಡುತ್ತಾರೆ. ಹಾಗಾಗಿ ಅಂತಹ ಅಭ್ಯರ್ಥಿಯನ್ನು ಚುನಾವಣೆ ಮೂಲಕ ಗೆಲ್ಲಿಸುವ ಜವಾಬ್ದಾರಿ ನಮ್ಮದಾಗಿದೆ ಎಂದು ಹೇಳಿದರು.

## ks channabasappa

2024ರ ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಾದ ದಿನದಿಂದ ಮಾರ್ಚ್ 31 ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 41 ಲಕ್ಷದ 90 ಸಾವಿರದ 025 ರೂಪಾಯಿ ಮೌಲ್ಯದ 12 ಸಾವಿರದ 843 ಲೀಟರ್ ಮದ್ಯವನ್ನು ಜಪ್ತಿ ಮಾಡಲಾಗಿದೆ. ಹಾಗೂ 8,69,950 ರೂ. ಮೌಲ್ಯದ 15.5 ಕೆಜಿ ಡ್ರಗ್ಸ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

ಅಬಕಾರಿ ನಿಯಮ ಉಲ್ಲಂಘನೆ ಹಾಗೂ ಇತರೆ ಸೇರಿದಂತೆ ಒಟ್ಟು 239 ಎಫ್ ಐ ಆರ್ ಪ್ರಕರಣ ದಾಖಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**SURESH D. PALLI**

ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಚುನಾವಣೆಯನ್ನು ಯಾವುದೇ ಗೊಂದಲಗಳಿಗೆ ಆಸ್ಪದ ನೀಡದಂತೆ ಸುಗಮ ಮತ್ತು ಪಾರದರ್ಶಕವಾಗಿ ನಡೆಸಲು, ಚುನಾವಣಾ ಕರ್ತವ್ಯ ನಿರ್ವಹಣೆಗಾಗಿ ಜಿಲ್ಲೆಯಲ್ಲಿ ಒಟ್ಟು 7632 ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ.

ಚುನಾವಣಾ ಕರ್ತವ್ಯ ನಿರ್ವಹಿಸಲು ಅಗತ್ಯವಿರುವ ಸಿಬ್ಬಂದಿಗಳ ನಿಯೋಜನೆ ಕುರಿತಂತೆ ರ್ಯಾಂಡಮೈಸೇಷನ್ ಕಾರ್ಯ ನಡೆದಿದ್ದು, ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತಮ್ಮ ಕರ್ತವ್ಯದ ಆದೇಶ ಪತ್ರಗಳನ್ನು ಕಳುಹಿಸಲಾಗುತ್ತಿದೆ.

ಜಿಲ್ಲೆಯಲ್ಲಿ ಚುನಾವಣಾ ಕರ್ತವ್ಯ ನಿರ್ವಹಿಸಲು 1435 ಮತಗಟ್ಟೆ ಸಿಬ್ಬಂದಿ, 1908 ಪ್ರಿಸೈಡಿಂಗ್ ಅಧಿಕಾರಿಗಳು, 1908 ಸಹಾಯಕ ಮತಗಟ್ಟೆ ಅಧಿಕಾರಿಗಳು, 3816 ಮತಗಟ್ಟೆ ಅಧಿಕಾರಿಗಳು ಸೇರಿದಂತೆ ಒಟ್ಟು 7632 ಸಿಬ್ಬಂದಿ ಗಳನ್ನು ನಿಯೋಜಿಸಲಾಗಿದೆ ಎಂದರು.

ದೀಪಕ ಗೋಕರ್ಣ/ಪಿಟಿಸಿ ಕಾರವಾರ

ಕೊಡಗು ಜಿಲ್ಲಾ ಸ್ವೀಪ್ ಸಮಿತಿ ಮತ್ತು ರೋಟರಿ ಜಿಲ್ಲೆ 3181 ರ ಸಂಯುಕ್ತ ಆಶ್ರಯದಲ್ಲಿ ಮತದಾನ ಜಾಗೃತಿ ಅಭಿಯಾನದ ಪ್ರಯುಕ್ತ ಮಡಿಕೇರಿಯ ರಾಜಾಸೀಟ್ ಮುಂಭಾಗದಲ್ಲಿ ಮತದಾನ ಜಾಗೃತಿ ಕುರಿತಾದ ಬೀದಿ ನಾಟಕ ಮತ್ತು ಕಾರು ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು.

ಕೊಡಗು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ವರ್ಣಿತ್ ನೇಗಿ ಚಾಲನೆ ನೀಡಿದರು.

ಮತದಾನ ಜಾಗೃತಿ ಕುರಿತಾಗಿ ಸಾರ್ವಜನಿಕರಿಗೆ ಚುನಾವಣಾ ಆಯೋಗದ ಸಹಾಯವಾಣಿ ಸಂಖ್ಯೆ 1950, ಮತ್ತು ಸಿ.ವಿಜಿಲ್ ಆಪ್ ಬಳಕೆ ಕುರಿತಾಗಿ ಮಾಹಿತಿ ನೀಡಿದರು.
ಅನಿಲ್ ಹೆಚ್.ಟಿ./ಮಡಿಕೇರಿ

ಲೋಕಸಭಾ ಚುನಾವಣೆಗಾಗಿ ಧಾರವಾಡ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾ ಮತದಾರರಿಗಾಗಿ ಸಹಾಯವಾಣಿ ಕೇಂದ್ರವನ್ನು ಇದೇ 16 ರಿಂದ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಬರುತ್ತಿದೆ. ಮತದಾರರ ಪ್ರತಿ ಕರೆಗೆ ಮಾಹಿತಿಯುಕ್ತ ಪರಿಹಾರ ತಿಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಚುನಾವಣಾ ಕಂಟ್ರೋಲ್ ರೂಮ್‌ನಲ್ಲಿ ಆರಂಭಿಸಲಾಗಿರುವ ಈ ಸಹಾಯವಾಣಿ ಕೇಂದ್ರವು ದಿನದ 24 ಗಂಟೆ ಕಾರ್ಯ ನಿರ್ವಹಿಸುತ್ತಿದೆ. ಜಿಲ್ಲೆಯ ಸಹಾಯವಾಣಿ ಕೇಂದ್ರಕ್ಕೆ 1950 ಟೋಲ್ ಫ್ರೀ ನಂಬರ್‌ನ ಸೌಕರ್ಯ ಕಲ್ಪಿಸಲಾಗಿದೆ. ಸಾರ್ವಜನಿಕರಿಂದ ಕರೆ ಸ್ವೀಕಾರಕ್ಕೆ ಒಟ್ಟು 6 ಸಿಬ್ಬಂದಿಗಳನ್ನು ಪ್ರತಿ 8 ಗಂಟೆಗಳಿಗೆ ಇಬ್ಬರಂತೆ ಕಾರ್ಯನಿರ್ವಹಿಸಲು ನೇಮಿಸಲಾಗಿದೆ ಎಂದು ತಿಳಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ರಾಜ್ಯದಲ್ಲಿ ಏಪ್ರಿಲ್ 26 ಮತ್ತು ಮೇ 7 ರಂದು ನಡೆಯುವ ಚುನಾವಣೆಯಲ್ಲಿ ಮತದಾನದ ಮಹತ್ವ ಕುರಿತಂತೆ ಸಾರ್ವಜನಿಕರಿಗಾಗಿ ರಾಜ್ಯಾದ್ಯಂತ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವ ರಾಜ್ಯ ಚುನಾವಣಾ ಆಯೋಗವು, ಚುನಾವಣಾ ಜಾಗೃತಿ ಕುರಿತು ಸಿದ್ಧಪಡಿಸಿರುವ ವಿಡಿಯೋದಲ್ಲಿ ಉತ್ತರ ಕನ್ನಡ ಜಿಲ್ಲೆಯ ಕಲೆ ಸಂಸ್ಕೃತಿ ಮತ್ತು ಪ್ರವಾಸಿ ತಾಣಗಳನ್ನು ಬಳಸಿಕೊಂಡು ಆಕರ್ಷಕ ವಿಡಿಯೋ ತಯಾರಿಸಿದ್ದು, ಈ ವಿಡಿಯೋಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಬೆಂಗಳೂರು ಅವರು, 'ಚುನಾವಣಾ ಪರ್ವ ದೇಶದ ಗರ್ವ' ಎಂಬ ಘೋಷವಾಕ್ಯದೊಂದಿಗೆ ಸಿದ್ಧಪಡಿಸಿರುವ ಈ ಜಾಗೃತಿ ವೀಡಿಯೋದಲ್ಲಿ ಉತ್ತರ ಕನ್ನಡ ಜಿಲ್ಲೆಯ ಸಿದ್ದಿ ಜನಾಂಗದ ಮಹಿಳೆಯರು ತಮ್ಮ ವಿಶಿಷ್ಠ ನೃತ್ಯ ಪ್ರಕಾರವಾದ ಡಮಾಮಿ ನೃತ್ಯದ ಮೂಲಕ ಮತ್ತು ಸಂಗೀತದ ಮೂಲಕ ಮತದಾನದ ಮಹತ್ವ ಕುರಿತಂತೆ ಜಾಗೃತಿ ಮೂಡಿಸುತ್ತಿದ್ದಾರೆ.

ದೀಪಕ ಗೋಕರ್ಣ/ಟಿಟಿಸಿ ಕಾರವಾರ

ಬೇಸಿಗೆ ಇರುವುದರಿಂದ ಜಾನುವಾರುಗಳಿಗೆ ಕಾಲುಬಾಯಿ ಜ್ವರ ರೋಗ ಬರುವ ಸಂಭವವಿದ್ದು, ಬಾಗಲಕೋಟೆ ಜಿಲ್ಲೆಯ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಆಫ್ತೋ ಎಂಬ ವೈರಾಣುವಿನಿಂದ ಬರುವ ಈ ರೋಗ ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುತ್ತದೆ. ಈ ರೋಗದಿಂದ ಜಾನುವಾರುಗಳನ್ನು ಮುಕ್ತಗೊಳಿಸಲು ಲಸಿಕೆ ಅವಶ್ಯವಾಗಿ ಹಾಕಿಸಬೇಕು ಎಂದರು.

ಈ ರೋಗದ ಲಕ್ಷಣ ಬಾಯಿಯಲ್ಲಿ ಹುಣ್ಣು, ಮೇವು ತಿನ್ನದೇ ಇರುವುದು, ಬಾಯಿಯಿಂದ ರಕ್ತ ಸ್ರಾವವಾಗುವುದು. ಇದು ಬಾಯಿ ಬೇನೆ ಲಕ್ಷಣವಾದರೆ, ಕಾಲಿನ ಗೊರಸುಗಳಲ್ಲಿ ಹುಣ್ಣಾಗಿ ಕಾಲು ನೆಲಕ್ಕೆ ಊರಲಾಗದಂತಹ ಪರಿಸ್ಥಿತಿ ಬರುತ್ತದೆ. ಈ ರೋಗದಿಂದ ಬಳಲುತ್ತಿರುವ ರಾಸುಗಳಿಂದ ರಾಸುಗಳಿಗೆ ಗಾಳಿ ನೀರಿನಿಂದ ಸೊಂಕು ಹರಡುತ್ತದೆ. ಇದರಿಂದ ಮುಕ್ತಿ ಹೊಂದಲು ಪ್ರತಿ 6 ತಿಂಗಳಿಗೊಮ್ಮೆ ಲಸಿಕೆಯನ್ನು ಹಾಕಿಸಬೇಕು ಎಂದರು.

**Parashuram Petkar**

ನಾಮಪತ್ರ ಸಲ್ಲಿಕೆಯ ಮೂರನೇ ದಿನವಾದ ನಿನ್ನೆ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಇಬ್ಬರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಕರುನಾಡ ಸೇವಕ ಪಕ್ಷದ ಅಭ್ಯರ್ಥಿಯಾಗಿ ದುರ್ಗಾಪ್ರಸಾದ್ ಹಾಗೂ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿಯಾಗಿ ರಂಜಿನಿ ಎಂ ಅವರ ನಾಮಪತ್ರ ಸಲ್ಲಿಕೆಯಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮುಲ್ಲೈ ಮುಗಿಲನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**SURESH D. PALLI**

ನಿರಂತರ ವಿದ್ಯುತ್ ಪೂರೈಸುವ ನಿಟ್ಟಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಮೈಸೂರು ಮತ್ತು ಗುಲ್ಬರ್ಗ ಪ್ರದೇಶಗಳ 400 ಕಿಲೋ ವ್ಯಾಟ್‌ವರೆಗಿನ ಪ್ರಸರಣ ಮಾರ್ಗಗಳು ಮತ್ತು ಸಬ್‌ಸ್ಟೇಷನ್‌ಗಳ ನಿರ್ವಹಣೆಗಾಗಿ ಎರಡು ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳನ್ನು ನಿಯೋಜಿಸಲಿದೆ ಎಂದು ಇಂಧನ ಖಾತೆ ಸಚಿವ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳ ಬಳಕೆಯಿಂದ ಗ್ರಾಹಕರಿಗೆ ತಡೆರಹಿತ ವಿದ್ಯುತ್ ಪೂರೈಕೆ ಸಾಧ್ಯವಾಗಲಿದೆ. ಹಾಗಾಗಿ ಈ ತಂತ್ರಜ್ಞಾನದ ಬಳಕೆಗೆ ಒತ್ತು ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಬೆಂಗಳೂರು, ಚಿತ್ರದುರ್ಗ ಮತ್ತು ಹುಬ್ಬಳ್ಳಿಯಲ್ಲಿ ಈಗಾಗಲೇ ಇಂತಹ ಮೂರು ಇನ್ಸುಲೇಟೆಡ್ ಏರಿಯಲ್ ವರ್ಕ್ ಪ್ಲಾಟ್‌ಫಾರ್ಮ್ ವಾಹನಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಿಂದ ಕೆಪಿಟಿಸಿಎಲ್‌ಗೆ ಕೋಟ್ಯಂತರ ರೂಪಾಯಿಗಳ ಉಳಿತಾಯವಾಗತ್ತಿದೆ ಎಂದರು.

ಹಾಟ್ ಲೈನ್ ನಿರ್ವಹಣೆ ತಂತ್ರಜ್ಞಾನದ ಅತ್ಯಾಧುನಿಕ ಇನ್ಸುಲೇಟೆಡ್ ಬಕೆಟ್ ವ್ಯಾನ್ ಮತ್ತು ಇನ್ಸುಲೇಟೆಡ್ ಸ್ಕ್ಯಾಫೋಲ್ಡಿಂಗ್ ಬಳಕೆಯಿಂದ ವಿದ್ಯುತ್ ಸ್ಥಗಿತಗೊಳಿಸದೆ ನಿರ್ವಹಣಾ ಚಟುವಟಿಕೆಯನ್ನು ಕೈಗೊಳ್ಳಲು ಸಾಧ್ಯವಾಗಲಿದೆ. ಗ್ರಾಹಕರಿಗೆ ತಡೆ ರಹಿತ ವಿದ್ಯುತ್ ಪೂರೈಕೆ ಜತೆಗೆ ವಿದ್ಯುತ್ ಕಂಪನಿಗಳ ನಿರ್ವಹಣಾ ವೆಚ್ಚವನ್ನೂ ಕಡಿತಗೊಳಿಸುವ ಈ ತ್ರಂಜ್ಞಾನದ ಬಳಕೆಗೆ ಕೆಪಿಟಿಸಿಎಲ್ ಮುಂದಾಗಿದೆ ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ ವಿವರಿಸಿದರು.

ಧಾರವಾಡ ಜಿಲ್ಲಾ ಪೊಲೀಸ್ ವತಿಯಿಂದ ಇಂದು ಬೆಳಗ್ಗೆ 8 ಗಂಟೆಗೆ, ಧಾರವಾಡದ ಪಿ.ಎಚ್.ಕ್ಯೂ. ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆ ಕವಾಯತು ಮೈದಾನದಲ್ಲಿ, ಪೊಲೀಸ್ ಧ್ವಜ ದಿನಾಚರಣೆ-2024 ಮತ್ತು ನಿವೃತ್ತ ಅಧಿಕಾರಿಗಳಿಗೆ ಗೌರವ ಸಮರ್ಪಣಾ ಸಮಾರಂಭ ಆಯೋಜಿಸಲಾಗಿದೆ.